**ಕರ್ನಾಟಕ ರಕ್ಷಣಾ ವೇದಿಕೆ**

# ಬೆಳಗಾವಿ ವಿಭಜನೆ ವಿರುದ್ಧ ಬೆಂಗಳೂರು ಮುತ್ತಿಗೆ



## ಸಿಎಂ ಮನೆಗೆ ಮುತ್ತಿಗೆ

ಬೆಂಗಳೂರು, ಮಾ.22- ಬೆಳಗಾವಿ ವಿಭಜನೆ ವಿರೋಧಿಸಿ ಅಲ್ಲಿನ ಕನ್ನಡ ಪರ ಸಂಘಟನೆಗಳ ಸಾವಿರಾರು ಕಾರ್ಯಕರ್ತರು ಇಂದು ಮುಖ್ಯಮಂತ್ರಿಯವರ ನಿವಾಸಕ್ಕೆ ಮುತ್ತಿಗೆ ಹಾಕಿದರು. ಬೆಳಗಾವಿಯನ್ನು ಎರಡು ಜಿಲ್ಲೆಗಳನ್ನಾಗಿ ಮಾಡುವ ಪ್ರಸ್ತಾಪ ಎತ್ತಿರುವ ಸರ್ಕಾರದ ಧೋರಣೆಯನ್ನು ವಿರೋಧಿಸಿ ಈ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಬೆಳಗಾವಿ ವಿಭಜನೆಯಿಂದ ಮರಾಠಿಗರಿಗೆ ಅನುಕೂಲವೇ ಹೊರತು ಅದರಿಂದಾಗಿ ಕನ್ನಡಿಗರಿಗೆ ಯಾವುದೇ ರೀತಿಯ ಅನುಕೂಲವಿಲ್ಲ. ಇದರಿಂದ ಕನ್ನಡಿಗರ ಒಗ್ಗಟ್ಟನ್ನು ಮುರಿದಂತಾಗುತ್ತದೆ. ಈಗ ಕನ್ನಡಕ್ಕೆ ದಕ್ಕೆ ಬಂದಾಗ ಒಂದಾಗಿ ಹೋರಾಡುವ ಕನ್ನಡಿಗರು ಆಗ ಹರಿದು ಹಂಚಿಹೋಗುತ್ತಾರೆ.

ಅಲ್ಲಿನ ಕನ್ನಡಿಗರಿಗೆ ಧಕ್ಕೆ ಬಂದಾಗ ಹೋರಾಟದ ಸ್ವರೂಪ ಕುಂದುವ ಸಾಧ್ಯತೆ ಇರುತ್ತದೆ. ಹಾಗಾಗಿ ಬೆಳಗಾವಿಯನ್ನು ಯಾವುದೇ ಕಾರಣಕ್ಕೂ ವಿಭಜನೆ ಮಾಡಬಾರದು ಎಂದು ಸರ್ಕಾರದ ಮೇಲೆ ಒತ್ತಡ ತರಲು ಅಲ್ಲಿಂದ ಸುಮಾರು 3 ಸಾವಿರಕ್ಕೂ ಹೆಚ್ಚು ಮಂದಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ನಗರಕ್ಕೆ ಆಗಮಿಸಿದ್ದರು.

ಕಿತ್ತೂರು ರಾಣಿ ಚೆನ್ನಮ್ಮ ಎಕ್ಸ್‌ಪ್ರೆಸ್ ಮೂಲಕ ಬೆಳಗಾವಿಯಿಂದ ಆಗಮಿಸಿದ ಕಾರ್ಯಕರ್ತರ ದಂಡು ಇಂದು ಬೆಳಗ್ಗೆ ನಗರದ ರೈಲ್ವೆ ನಿಲ್ದಾಣದಲ್ಲಿ ಸಮಾವೇಶಗೊಂಡಿತು. ನಂತರ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ನೇತೃತ್ವದಲ್ಲಿ ರೈಲ್ವೆ ನಿಲ್ದಾಣದಿಂದ ಮುಖ್ಯಮಂತ್ರಿ ನಿವಾಸದವರೆಗೆ ಕಾಲ್ನಡಿಗೆಯಲ್ಲಿ ತೆರಳಿ ಮನವಿ ಪತ್ರ ಸಲ್ಲಿಸಿತು.

ಸರ್ಕಾರ ಬೆಳಗಾವಿ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮವನ್ನು ಸ್ವಾಗತಿಸಿರುವ ಕರವೇ, ಜಿಲ್ಲಾಧ್ಯಕ್ಷ ರಾಜು ತೋಪಣ್ಣ ಸರ್ಕಾರ ಯಾವುದೇ ಕಾರಣಕ್ಕೂ ಬೆಳಗಾವಿಯನ್ನು ವಿಭಜನೆ ಮಾಡಬಾರದು ಎಂದು ಒತ್ತಾಯಿಸಿದ್ದಾರೆ. ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಮಾತನಾಡಿ ಬೆಳಗಾವಿಯಲ್ಲಿ ಈಗಾಗಲೇ ಕನ್ನಡಿಗರು ಅಲ್ಪಸಂಖ್ಯಾತರಾಗಿದ್ದಾರೆ. ಕನ್ನಡಿಗರ ಮೇಲೆ ಪದೇ ಪದೇ ದಾಳಿ ನಡೆಯುತ್ತಲೇ ಇದೆ. ಬೆಳಗಾವಿಯನ್ನು ಮಹಾರಾಷ್ಟ್ರಕ್ಕೆ ಸೇರಿಸಿಕೊಳ್ಳುವಲ್ಲಿ ಸತತ ಪ್ರಯತ್ನ ನಡೆಯುತ್ತಿದೆ.

ಹೀಗಿರುವಾಗ ಬೆಳಗಾವಿಯನ್ನು ಎರಡು ಜಿಲ್ಲೆಯನ್ನಾಗಿ ವಿಭಜನೆ ಮಾಡಿದರೆ ಅಲ್ಲಿ ಕನ್ನಡಿಗರ ಶಕ್ತಿ ಮತ್ತಷ್ಟು ಕುಂದಲಿರುವುದರಿಂದ ಯಾವುದೇ ಕಾರಣಕ್ಕೂ ಇಂತಹ ಕಾರ್ಯಕ್ಕೆ ಮುಂದಾಗಬಾರದೆಂದು ಸರ್ಕಾರವನ್ನು ಆಗ್ರಹಿಸಿದ್ದಾರೆ.

# ಕರ್ನಾಟಕ ರಕ್ಷಣಾ ವೇದಿಕೆ

